ಕರ್ನಾಟಕ ವಿಧಾನ ಪರಿಷತ್ತು

ಲಘು ಪ್ರಕಟಣೆ ಭಾಗ – 2

(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)

ಬುಧವಾರ, ದಿನಾಂಕ: 07ನೇ ಜೂನ್, 2023

ಸಂಖ್ಯೆ: **25**

"ಪಿ.ಆರ್.ಎಸ್. ಶಾಸನ ಸಂಶೋಧನಾ ಸಂಸ್ಥೆ"ಯ ವತಿಯಿಂದ ದಿನಾಂಕ:06.07.2023 ಮತ್ತು 07.07.2023ರಂದು ನವದೆಹಲಿಯಲ್ಲಿ ನಡೆಯಲಿರುವ **"Infrastructure"** ವಿಷಯಕ್ಕೆ ಸಂಬಂಧಿಸಿದಂತೆ ಎಲ್ಲಾ ರಾಜ್ಯ ವಿಧಾನ ಮಂಡಲದ ಶಾಸಕರುಗಳಿಗೆ ಕಾರ್ಯಾಗಾರವನ್ನು ಆಯೋಜಿಸಲಾಗಿರುತ್ತದೆ. ಸದರಿ ತರಬೇತಿಯ ನೋಂದಣಿ ಪತ್ರವನ್ನು ಇದರೊಂದಿಗೆ ಲಗತ್ತಿಸಲಾಗಿದೆ.

ಆಸಕ್ತಿಯುಳ್ಳ ಎಲ್ಲಾ ಮಾನ್ಯ ಶಾಸಕರುಗಳು ವಿಧಾನ ಪರಿಷತ್ತಿನ ಶಾಸನ ರಚನಾ ಶಾಖೆಗೆ (ವಿಧಾನ ಸೌಧದ ಮೊದಲನೇ ಮಹಡಿಯ ಕೊಠಡಿ ಸಂಖ್ಯೆ:105) ದಿನಾಂಕ:30.06.2023ರೊಳಗಾಗಿ ಮಾಹಿತಿಯನ್ನು ನೀಡಬೇಕೆಂದು ಕೋರಲಾಗಿದೆ. ಸದರಿ ತರಬೇತಿಯಲ್ಲಿ ಭಾಗವಹಿಸುವ ಶಾಸಕರುಗಳು ಸ್ವತಃ ಪ್ರಯಾಣ ವೆಚ್ಚವನ್ನು ಭರಿಸುವುದು ಹಾಗೂ ವಾಸ್ತವ್ಯದ ವ್ಯವಸ್ಥೆಯನ್ನು ಮಾಡಿಕೊಳ್ಳತಕ್ಕದೆಂದು ಈ ಮೂಲಕ ತಿಳಿಸಲಾಗಿದೆ. **(ಆಯೋಜಕರು ಪತ್ರದಲ್ಲಿ ಪ್ರಕಟಿಸಿರುವಂತೆ ಕುಟುಂಬದ ಸದಸ್ಯರು/ಆಪ್ತ ಸಹಾಯಕರು ಈ ಕಾರ್ಯಾಗಾರದಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ).**

ಕೆ.ಆರ್.ಮಹಾಲಕ್ಷ್ಮಿ
ಕಾರ್ಯದರ್ಶಿ

ವಿಧಾನ ಪರಿಷತ್ತಿನ ಎಲ್ಲಾ ಮಾನ್ಯ ಶಾಸಕರುಗಳ ಮಾಹಿತಿಗಾಗಿ.